**ಕರ್ನಾಟಕ ಸರ್ಕಾರ**

**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಕೇಂದ್ರೀಕೃತ ದಾಖಲಾತಿ ಘಟಕ, ಕೆ.ಜಿ ರಸ್ತೆ, ಬೆಂಗಳೂರು 09**

## ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಅಭ್ಯರ್ಥಿಗಳಿಗೆ ವಿಶೇಷ ಸೂಚನೆಗಳು

## 2021-22 ನೇ ಸಾಲಿನಲ್ಲಿ ಎರಡು ವರ್ಷದ ಬಿ.ಇಡಿ., ಕೋರ್ಸಿನ ದಾಖಲಾತಿಗಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಗಮನಿಸಬೇಕಾದ ಮುಖ್ಯವಾದ ಅಂಶಗಳು.

- ಅಭ್ಯರ್ಥಿಗಳು ಆನ್‌ಲೈನ್ ಅರ್ಜಿ ಸಲ್ಲಿಸುವ ಮೊದಲು ಸಾರ್ವಜನಿಕ ಶಿಕ್ಷಣ ಇಲಾಖೆಯ ವೆಬ್‌ಸೈಟ್ http://schooleducation.kar.nic.in ನೀಡಲಾದ ಅಭ್ಯರ್ಥಿಗಳಿಗೆ ಸೂಚನೆಗಳನ್ನು ಓದಿ ಅರ್ಥೈಸಿಕೊಳುವುದು.

- **ಅಭ್ಯರ್ಥಿಗಳು ಆನ್‌ಲೈನ್ ಅರ್ಜಿ ಭರ್ತಿ ಮಾಡುವ ಮುನ್ನ ಅಧಿಸೂಚನೆಯಲ್ಲಿನ ಸಾಮಾನ್ಯ ಸೂಚನೆಗಳು, ಪ್ರಮುಖ ಸೂಚನೆಗಳನ್ನು ಓದಿ ಮನದಟ್ಟು ಮಾಡಿಕೊಂಡು ಶೈಕ್ಷಣಿಕ ವಿದ್ಯಾರ್ಹತೆ, ವಯೋಮಿತಿ, ಶುಲ್ಕ, ಮೀಸಲಾತಿ ಮತ್ತಿತರ ವಿವರಗಳನ್ನು ಖಚಿತಪಡಿಸಿಕೊಂಡು ತಪ್ಪಿಲ್ಲದೆ ಆನ್‌ಲೈನ್ ಅರ್ಜಿ ಭರ್ತಿ ಮಾಡುವುದು.**

- **ಅಭ್ಯರ್ಥಿಗಳು** ಅರ್ಜಿಯನ್ನು ONLINE ಮೂಲಕವೇ ಸಲ್ಲಿಸಬೇಕು. ಇತರೆ ಯಾವುದೇ ನಮೂನೆಗಳಲ್ಲಿಯಾಗಲೀ ಅಥವಾ ಬೆರಳಚ್ಚು / ಫೋಟೋ ಪ್ರತಿ ಮಾಡಿರುವ, ಕೈ ಬರಹದಿಂದ ಬರೆದಿರುವ ಅರ್ಜಿಗಳನ್ನು ಸಲ್ಲಿಸಲು ಅವಕಾಶವಿರುವುದಿಲ್ಲ ಮತ್ತು ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

- ಬಿ.ಇಡಿ ಕೋರ್ಸಿಗೆ ದಾಖಲಾತಿ ಬಯಸುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು www.schooleducation.kar.nic.in ಅಂತರ್ಜಾಲ ತಾಣದಲ್ಲಿ login ಆಗಿ Registration ಮತ್ತು Login ನೊಂದಿಗೆ ಆನ್‌ಲೈನ್ ಅರ್ಜಿಯನ್ನು ಪೂರ್ಣ ವಿವರಗಳೊಂದಿಗೆ ಭರ್ತಿ ಮಾಡುವುದು.

- **"ONLINE" ಅರ್ಜಿಗಳನ್ನು ದಿನಾಂಕ: 23-09-2021 ರಿಂದ 13-10-2021ರ ರಾತ್ರಿ 12.00ರ ಒಳಗಾಗಿ ಸಲ್ಲಿಸುವುದು.**

- ಸ್ಕ್ಯಾನ್ ಮಾಡಿದ ಅಭ್ಯರ್ಥಿಯ ಭಾವಚಿತ್ರ (50 KB ಕ್ಕಿಂತಲೂ ಕಡಿಮೆ) ಹಾಗೂ ಸಹಿಯನ್ನು (40 KB ಕ್ಕಿಂತಲೂ ಕಡಿಮೆ) ಅಪ್‌ಲೋಡ್ ಮಾಡುವುದು.

- ONLINE ಅರ್ಜಿಯಲ್ಲಿ ಮೀಸಲಾತಿ ಸೌಲಭ್ಯಕ್ಕಾಗಿ ಇರುವ ಅಂಕಣವನ್ನು, ಮೀಸಲಾತಿ ಬಯಸುವ ಅಭ್ಯರ್ಥಿಗಳು ಕಡ್ಡಾಯವಾಗಿ ಭರ್ತಿ ಮಾಡತಕ್ಕದ್ದು. ಅಂಕಣವನ್ನು ಖಾಲಿ ಬಿಟ್ಟಲ್ಲಿ ಅಥವಾ ತಪ್ಪಾಗಿ ನಮೂದಿಸಿದ್ದಲ್ಲಿ ಅದರಿಂದಾಗುವ ತೊಂದರೆಗಳಿಗೆ ಅಭ್ಯರ್ಥಿಗಳೇ ನೇರ ಹೊಣೆಗಾರರಾಗಿರುತ್ತಾರೆ. ನಂತರ ಯಾವುದೇ ಹಂತದಲ್ಲಿ ಮೀಸಲಾತಿಯನ್ನು ಸೇರ್ಪಡೆ/ತಿದ್ದುಪಡಿ ಮಾಡಲು ಅವಕಾಶವಿರುವುದಿಲ್ಲ.

- ಮೀಸಲಾತಿ ಕೋರುವ ಎಲ್ಲಾ ಪ್ರಮಾಣ ಪತ್ರಗಳ ನಮೂನೆಗಳನ್ನು ಈ ವೆಬ್‌ಸೈಟ್‌ನಲ್ಲಿ ನೀಡಿರುವ Brochure ನಲ್ಲಿ ಕೊಟ್ಟಿರುವಂತೆ ಅಥವಾ ಅನ್ವಯಿಸುವ ನಿಯಮಗಳ ನಮೂನೆಯಲ್ಲಿಯೇ ಇರಬೇಕು. ಪ್ರಮಾಣ ಪತ್ರಗಳನ್ನು ನಿರ್ದಿಷ್ಟ ಹಾಗೂ ಸಂಬಂಧಪಟ್ಟ ಪ್ರಾಧಿಕಾರದಿಂದ ಅಭ್ಯರ್ಥಿಯು ONLINE ಮೂಲಕ ಅರ್ಜಿ ಸಲ್ಲಿಸುವ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು.

- ಪ್ರಕಟವಾಗುವ ಪರದೆಯಲ್ಲಿ ವಿಶೇಷ ಗುಂಪಿನ ಅಂಕಣದಲ್ಲಿ ಗಡಿನಾಡು ಕನ್ನಡಿಗರು ಅಥವಾ ಹೊರನಾಡು ಕನ್ನಡಿಗರು ಆಗಿದ್ದಲ್ಲಿ ಕಡ್ಡಾಯವಾಗಿ ಭರ್ತಿ ಮಾಡತಕ್ಕದ್ದು.

- ಅಭ್ಯರ್ಥಿಗಳು ತಮ್ಮ ಮೂಲ ಪ್ರಮಾಣ ಪತ್ರಗಳ ಪರಿಶೀಲನೆಗೆ ಹಾಜರಾಗಲು ಬಯಸುವ ಜಿಲ್ಲಾ ನೋಡೆಲ್ ಕೇಂದ್ರ/ ವ್ಯವಸ್ಥಾಪಕ ಕೇಂದ್ರ **(CTE/DIET)** ಗಳನ್ನು **ಅನುಬಂಧ-04**ರಲ್ಲಿ ನೀಡಲಾಗಿದೆ. ಅದರಂತೆ, ಅಭ್ಯರ್ಥಿಗಳು ಬಯಸುವ ಜಿಲ್ಲಾ ವ್ಯವಸ್ಥಾಪಕ ಕೇಂದ್ರಗಳನ್ನು ಅರ್ಜಿಯಲ್ಲಿ ಆಯ್ಕೆಮಾಡಿಕೊಳ್ಳುವುದು.

- ಅಭ್ಯರ್ಥಿಯು ಅರ್ಜಿ ಶುಲ್ಕ ಪಾವತಿಸಿ, Submit ಮಾಡುವ ಮೊದಲು ತನ್ನ ಅರ್ಜಿಯಲ್ಲಿನ ಮಾಹಿತಿಗಳನ್ನು ತಿದ್ದುಪಡಿ ಮಾಡಬಹುದು, ಆದ್ದರಿಂದ ಅಭ್ಯರ್ಥಿಯು ಶುಲ್ಕ ಪಾವತಿಸಿ, Submit ಮಾಡುವ ಮೊದಲು ಅರ್ಜಿಯಲ್ಲಿನ ಮಾಹಿತಿಗಳನ್ನು ಜಾಗರೂಕತೆಯಿಂದ ಓದಿ ಭರ್ತಿಮಾಡಿ, ಸರಿಯಾಗಿ ನಮೂದಿಸಿರುವುದನ್ನು ಖಚಿತಪಡಿಸಿಕೊಂಡು Submit ಮಾಡುವುದು.

- ಅಭ್ಯರ್ಥಿಯು ಅರ್ಜಿ ಶುಲ್ಕ ಪಾವತಿಸಿ, ಅರ್ಜಿಯನ್ನು ಒಮ್ಮೆ Submit ಮಾಡಿದ ಮೇಲೆ ಯಾವುದೇ ಮಾಹಿತಿಗಳನ್ನು ಭರ್ತಿ ಮಾಡಲು ಅವಕಾಶವಿರುವುದಿಲ್ಲ. ಈ ಸಂಬಂಧ ಅಭ್ಯರ್ಥಿಗಳಿಂದ ಯಾವುದೇ ಮನವಿಗಳನ್ನು ಕೇಂದ್ರೀಕೃತ ದಾಖಲಾತಿ ಘಟಕದಲ್ಲಿ ಸ್ವೀಕರಿಸಲಾಗುವುದಿಲ್ಲ.

- ಅರ್ಜಿ ಶುಲ್ಕವನ್ನು **"<u>ONLINE</u>" ಮೂಲಕ ಅಂದರೆ INTERNET BANKING /CREDIT CARD /DEBIT CARD/UPI ಅಥವಾ ಬ್ಯಾಂಕ್ ಚಲನ್ (ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಬ್ಯಾಂಕಿನಲ್ಲಿ ಮಾತ್ರ ಚಲನ್ ಮೂಲಕ ಶುಲ್ಕ ಪಾವತಿಸುವುದು) ಮೂಲಕವೇ ಪಾವತಿಸತಕ್ಕದ್ದು.**
- **ಚಲನ್ ಮೂಲಕ** ಅರ್ಜಿ ಶುಲ್ಕ **ಪಾವತಿಸುವವರು ಚಲನ್ ಅನ್ನು ಡೌನ್‌ಲೋಡ್ ಮಾಡಿಕೊಂಡು ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಬ್ಯಾಂಕಿನಲ್ಲಿ ಅರ್ಜಿಶುಲ್ಕ ಪಾವತಿಸುವುದು. ಶುಲ್ಕ ಪಾವತಿಸಿದ ನಂತರ ಆನ್‌ಲೈನ್ ಅರ್ಜಿಯಲ್ಲಿ ಚಲನ್ ನಂಬರ್ Challan No.(ATRN) ತಂತಾನೆ GENERATE ಆಗುತ್ತದೆ. Challan No.(ATRN) ನಂಬರ್ GENERATE ಆಗಲು 24 ಗಂಟೆಗಳ ಕಾಲಾವಕಾಶ ತೆಗೆದುಕೊಳ್ಳುವುದು. ನಂತರವಷ್ಟೇ** ಅರ್ಜಿಯ Printout ತೆಗೆದುಕೊಳ್ಳುವುದು.
- **ಇನ್ಯಾವುದೇ ರೂಪದಲ್ಲಿ ಶುಲ್ಕ ಪಾವತಿಸಲು ಅವಕಾಶವಿರುವುದಿಲ್ಲ. INTERNET Crash ಅನ್ನು ತಪ್ಪಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆವಿಗೂ ಕಾಯದೇ ಮುಂಚಿತವಾಗಿ ಅರ್ಜಿ ಸಲ್ಲಿಸುವುದು.**

  **ಸೂಚನೆ:**ಅಭ್ಯರ್ಥಿಯು ಆನ್‌ಲೈನ್‌ನಲ್ಲಿ ಅರ್ಜಿಶುಲ್ಕ ಪಾವತಿಸುವ ಸಂದರ್ಭದಲ್ಲಿ ಅರ್ಜಿಶುಲ್ಕವು ಅಭ್ಯರ್ಥಿಯ ಉಳಿತಾಯ ಖಾತೆಯಲ್ಲಿ DEBIT ಆಗಿ ಕೇಂದ್ರೀಕೃತ ದಾಖಲಾತಿ ಘಟಕದ ಬ್ಯಾಂಕ್ ಖಾತೆಗೆ ಜಮೆ ಆಗದೆ Transaction Failure ಆದಾಗ ಅರ್ಜಿಯ Printout ಬರುವುದಿಲ್ಲ ಇದಕ್ಕೆ ಈ ಕಛೇರಿಯು ಜವಾಬ್ದಾರಿಯಾಗಿರುವುದಿಲ್ಲ.

- ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿ ಶುಲ್ಕ ಪಾವತಿಸಿದ ನಂತರ, ಅಭ್ಯರ್ಥಿಯು ತನ್ನ ಆನ್‌ಲೈನ್ ಅರ್ಜಿಯನ್ನು User name ಮತ್ತು Password ಅನ್ನು ನಮೂದಿಸಿ, ಡೌನ್ ಲೋಡ್ ಮಾಡಿಕೊಳ್ಳುವುದು.

- ಅಭ್ಯರ್ಥಿಯು ಆನ್‌ಲೈನ್‌ನಲ್ಲಿ ಶುಲ್ಕ ಪಾವತಿ ಮಾಡಲಾಗಿದೆ ಎಂದಾಕ್ಷಣ ಅರ್ಜಿಯು ಪರಿಪೂರ್ಣವಾಗಿ ಸಲ್ಲಿಕೆವಾಗಿರುವುದಿಲ್ಲ. ಆನ್‌ಲೈನ್ ಅರ್ಜಿಯ Printout ಬಂದರೆ ಮಾತ್ರ ಅರ್ಜಿಯು ಪರಿಪೂರ್ಣವಾಗಿ ಸಲ್ಲಿಕೆಯಾಗಿದೆ ಎಂದರ್ಥ. ಅಭ್ಯರ್ಥಿಯು ಶುಲ್ಕ ಪಾವತಿಸಿದ ನಂತರ ಆನ್‌ಲೈನ್ ಅರ್ಜಿಯ Printout ತೆಗೆದುಕೊಳ್ಳುವುದು ಕಡ್ಡಾಯವಾಗಿರುತ್ತದೆ.

- ಶುಲ್ಕ ಪಾವತಿಸಿದ ಕೂಡಲೇ ಆನ್‌ಲೈನ್ ಮೂಲಕ ಸಲ್ಲಿಸಿದ ಅರ್ಜಿಯ ಮುದ್ರಿತ ಮೂಲ ಪ್ರತಿಯನ್ನು ಪಡೆದುಕೊಂಡು ಮುಂದಿನ ಉಪಯೋಗಕ್ಕಾಗಿ ಸಂರಕ್ಷಿಸಿ ಇಟ್ಟುಕೊಳ್ಳುವುದು. ದಾಖಲಾತಿ ಸಂದರ್ಭದಲ್ಲಿ ಅರ್ಜಿಯನ್ನು ಪರಿಶೀಲನೆಗೆ ಹಾಗೂ ಕಛೇರಿ ಸಂಬಂಧಿತ ಆಡಳಿತ ಸಂಪರ್ಕಕ್ಕಾಗಿ ಒದಗಿಸಬೇಕಿರುತ್ತದೆ.

- ಮುದ್ರಿತ ಅರ್ಜಿಯು ಒಂದು ವೇಳೆ ಕಳೆದು ಹೋದಲ್ಲಿ ಮೇಲೆ ತಿಳಿಸಿದ ವೆಬ್‌ಸೈಟ್‌ನಲ್ಲಿ ನಿಮ್ಮ User ID and Password ಗಳನ್ನು ಭರ್ತಿ ಮಾಡಿ ಪ್ರತಿಯನ್ನು ಪಡೆದುಕೊಳ್ಳಬಹುದಾಗಿದೆ.

- ಅಭ್ಯರ್ಥಿಗಳು ಆನ್‌ಲೈನ್ ಅರ್ಜಿ ಮೂಲಕ ನೀಡಿರುವ ಮಾಹಿತಿಗಳನ್ನು ಪ್ರತಿ ಹಂತದಲ್ಲಿಯೂ ಕಡ್ಡಾಯವಾಗಿ Submit ಮಾಡುವುದು. ಪ್ರತಿ ಹಂತದಲ್ಲೂ ಅಗತ್ಯವಿರುವ ಅಧಿಕೃತ ಮಾಹಿತಿಯ ದಾಖಲೆಗಳನ್ನು ಎಚ್ಚರಿಕೆಯಿಂದ ಮೊದಲೇ ಸಿದ್ಧಪಡಿಸಿಟ್ಟುಕೊಂಡು, ಸರಿಯಾದ ಮಾಹಿತಿ ಭರ್ತಿ ಮಾಡಿರುವುದನ್ನು ಖಾತ್ರಿಪಡಿಸಿಕೊಂಡ ನಂತರವೇ ಆನ್‌ಲೈನ್ ಅರ್ಜಿಗಳನ್ನು ಪೂರ್ಣಗೊಳಿಸಿ Submit ಮಾಡುವುದು. ಅಭ್ಯರ್ಥಿಯು ಅಂತಿಮವಾಗಿ Submit ಮಾಡಿದ ನಂತರ ಅರ್ಜಿಯಲ್ಲಿ ಭರ್ತಿ ಮಾಡಿದ ಯಾವುದೇ ಮಾಹಿತಿಯನ್ನು ತಿದ್ದುಪಡಿ ಮಾಡಲು ಅವಕಾಶವಿರುವುದಿಲ್ಲ.

- ಆನ್‌ಲೈನ್ ಮೂಲಕ ಅರ್ಜಿಯನ್ನು ಭರ್ತಿಮಾಡುವ ಸಂದರ್ಭದಲ್ಲಿ ತಾಂತ್ರಿಕ ತೊಂದರೆ ಅಥವಾ ಸಮಸ್ಯೆ ಎದುರಾದಲ್ಲಿ ಈ ಕೆಳಕಂಡ ಸ್ಥಿರ ದೂರವಾಣಿ ಸಂಖ್ಯೆಗಳ ಮೂಲಕ ಮಾತ್ರ ಸಂಪರ್ಕಿಸಿ ಅಗತ್ಯ ಮಾಹಿತಿಯನ್ನು ಪಡೆಯಬಹುದಾಗಿದೆ. **ಯಾವುದೇ ಕಾರಣಕ್ಕೂ ಹಿರಿಯ ಅಧಿಕಾರಿಗಳ ಮೊಬೈಲ್ ಸಂಖ್ಯೆಗಳಿಗೆ ಈ ಸಂಬಂಧ ಕರೆ ಮಾಡಬಾರದು ಹಾಗೂ ಅಂತಹ ಕರೆಗಳನ್ನು ಸ್ವೀಕರಿಸಲಾಗುವುದಿಲ್ಲ. ದೂರವಾಣಿ ಸಂಖ್ಯೆಗಳು: 080–22483140, 080–22483145 ಮತ್ತು 080–22228805.**

- ONLINE ಅರ್ಜಿಯ ಮೂಲಕ ನೀಡಿರುವ ಮಾಹಿತಿಗಳನ್ನೇ ಆಧಾರವಾಗಿಟ್ಟುಕೊಂಡು ಅಭ್ಯರ್ಥಿಗಳ Counselling ಪ್ರಕ್ರಿಯೆಯನ್ನು ನಡೆಸುವುದರಿಂದ, ಯಾವುದೇ ಹಂತದಲ್ಲಿ ಅಪೂರ್ಣ / ಅಸ್ಪಷ್ಟ / ತಪ್ಪು ಮಾಹಿತಿ ನೀಡಿದಲ್ಲಿ ಅಭ್ಯರ್ಥಿಗಳೇ ಸಂಪೂರ್ಣ ಹೊಣೆಗಾರರಾಗಿರುತ್ತಾರೆ.

- ಒಮ್ಮೆ ಪಾವತಿಸಿದ ಅರ್ಜಿಯ ಶುಲ್ಕವನ್ನು ಯಾವುದೇ ಕಾರಣಕ್ಕೂ ಹಿಂದಿರುಗಿಸುವುದಿಲ್ಲ ಹಾಗೂ ಹೊಂದಾಣಿಕೆ ಮಾಡಲಾಗುವುದಿಲ್ಲ.

**ಅಭ್ಯರ್ಥಿಗಳು ಗಮನಿಸಬೇಕಾದ ಅಂಶಗಳು :-**

1. ಪ್ರತಿ ಹಂತದಲ್ಲಿಯೂ ಅವಶ್ಯಕ ವಿವರಗಳನ್ನು ಪೂರ್ಣವಾಗಿ ಭರ್ತಿ ಮಾಡಿದ ನಂತರದಲ್ಲಿ ತಪ್ಪದೆ Submit ಮಾಡಿ ಮುಂದಿನ ಹಂತದ ವಿವರಗಳನ್ನು ಭರ್ತಿ ಮಾಡುವುದು.

2. ಶೈಕ್ಷಣಿಕ ಶಿಕ್ಷಣದ ಅಂಕ ವಿವರಗಳನ್ನು ಅಂಕಪಟ್ಟಿಯಲ್ಲಿರುವಂತೆ ಎಲ್ಲಾ ವರ್ಷಗಳ ಗರಿಷ್ಠ ಅಂಕಗಳು ಹಾಗೂ ಪಡೆದ ಅಂಕಗಳನ್ನು ನಿಗಧಿತ ಅಂಕಣಗಳಲ್ಲಿ ಭರ್ತಿ ಮಾಡುವುದು. ಸಂಬಂಧಿತ ಬೋರ್ಡ್/ವಿಶ್ವವಿದ್ಯಾನಿಲಯಗಳು ಗ್ರೇಡ್‌ನಿಂದ ಅಂಕಗಳಿಗೆ ಅಳವಡಿಸಲಾಗುವ ಅಂಕ ಪರಿವರ್ತನಾ ಪಟ್ಟಿಯನ್ನು ಸ್ಕ್ಯಾನ್ ಮಾಡಿ ಕಡ್ಡಾಯವಾಗಿ ಅಪ್‌ಲೋಡ್ ಮಾಡುವುದು. (Scan and upload conversion table from Grade to Marks)

3. ಕೆಲವು ವಿಶ್ವವಿದ್ಯಾಲಯಗಳ ಅಂಕಪಟ್ಟಿಗಳಲ್ಲಿ ಅಂಕಗಳಿಗೆ ಬದಲಾಗಿ ಗ್ರೇಡ್ ನಮೂದಿಸಲಾಗಿದ್ದು, ಅಂತಹ ಸಂದರ್ಭದಲ್ಲಿ ಸಂಬಂಧಪಟ್ಟ ವಿಶ್ವವಿದ್ಯಾಲಯದ ನಿಯಮಾನುಸಾರ ಗ್ರೇಡ್‌ನ್ನು ಅಂಕಗಳಿಗೆ ಪರಿವರ್ತಿಸಿ ನಿಗದಿತ ಅಂಕಣಗಳಲ್ಲಿ ಅಂಕಗಳನ್ನು ಮಾತ್ರವೇ ಭರ್ತಿ ಮಾಡುವುದು. ಈ ಕಛೇರಿಯಲ್ಲಿ ಅಭ್ಯರ್ಥಿಗಳ ಗ್ರೇಡ್‌ಗಳನ್ನು ಅಂಕಗಳನ್ನಾಗಿ ಪರಿವರ್ತಿಸುವುದಿಲ್ಲ. ಅದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ.

4. **ಆನ್‌ಲೈನ್ ಅರ್ಜಿಯಲ್ಲಿ ನಮೂದಿಸಿದ ಅಭ್ಯರ್ಥಿಯ ಎಲ್ಲಾ ವಿವರಗಳು ಸಮರ್ಪಕವಾಗಿದೆ ಎಂದು ದೃಢಪಡಿಸಿಕೊಂಡು Submit ಮಾಡಿದ ನಂತರದಲ್ಲಿ ಯಾವುದೇ ಬದಲಾವಣೆಗೆ ಅವಕಾಶ ಇರುವುದಿಲ್ಲ.**

5. ಜಾತಿ, ಆದಾಯ ಪ್ರಮಾಣ ಪತ್ರ ಮತ್ತು ಹೈ.ಕ.ಮೀಸಲಾತಿ 371(ಜೆ) ಗೆ ಸಂಬಂಧಿಸಿದ ಮೀಸಲಾತಿಯ ಪ್ರಮಾಣ ಪತ್ರಗಳ ಆರ್.ಡಿ ನಂಬರ್ ಲಭ್ಯವಿದ್ದಲ್ಲಿ ನಮೂದಿಸುವುದು. ಇಲ್ಲವಾದಲ್ಲಿ ಸಂಬಂಧಿತ ಪ್ರಮಾಣ ಪತ್ರಗಳನ್ನು upload ಮಾಡುವುದು.

**ವೇಳಾ ಪಟ್ಟಿ (Calendar of Events):-**

1. **ಅರ್ಜಿಯನ್ನು ತುಂಬಲು ನಿಗದಿಪಡಿಸಿದ ಪ್ರಾರಂಭಿಕ ದಿನಾಂಕಃ 23–09–2021**
2. **ಅರ್ಜಿ ಮತ್ತು ಶುಲ್ಕವನ್ನು ಸಲ್ಲಿಸಲು ಕೊನೆಯ ದಿನಾಂಕ: 13–10–2021**

# ಆನ್ ಲೈನ್ ಅರ್ಜಿ ಸಲ್ಲಿಕೆಯ ವಿವಧ ಹಂತಗಳು (Flow Chart)

www.schooleducation.kar.nic.in



## Flow chart for Online Application

www.schooleducation.kar.nic.in

⇩

Online application for admission of 2yrs BEd course

⇩

Register

⇩

Login

⇩

Personnel details

⇩

Reservation details

⇩

Education Details

⇩

Preference

⇩

Photo & Sign (upto 50 KB)

⇩

Payment